# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಅಲ್ಪಸಂಖ್ಯಾತರ ಇಲಾಖೆಯಿಂದ 05 ಮೊರಾರ್ಜಿದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಸ್ತುತ ವಿಜ್ಞಾನ ವಿಭಾಗವಿದ್ದು, ಜೊತೆಗೆ ವಾಣಿಜ್ಯ ವಿಭಾಗ ಪ್ರಾರಂಭಿಸಲು ಹುದ್ದೆಗಳನ್ನು ಸೃಜಿಸಿ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ:** 1. 2018-19ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ- **219**.

2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಏಕಕಡತ ಸಂಖ್ಯೆ: ಅಸಂನಿ/ಮೊದೇವಶಾ/ಕಾ/ಸಂ.ಬ/ಸಿಆರ್-16/2018-19 ದಿನಾಂಕ: 02-04-2018

*~*~*~*~**

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ 2018-19ನೇ ಸಾಲಿನ ಮಾನ್ಯ ಮುಖ್ಯಮಂತ್ರಿಗಳ ಆಯವ್ಯಯ ಭಾಷಣದ **ಕಂಡಿಕೆ-219 ರಲ್ಲಿ 05 ಮೊರಾರ್ಜಿದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಸ್ತುತ ವಿಜ್ಞಾನ ವಿಭಾಗವಿದ್ದು, ಜೊತೆಗೆ ವಾಣಿಜ್ಯ ವಿಭಾಗ ಪ್ರಾರಂಭಿಸಲಾಗುವುದು ಎಂದು ಘೋಷಿಸಿರುತ್ತಾರೆ.**

ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಉತ್ತಮ ಮೂಲಭೂತ ಸೌಕರ್ಯ ಹೊಂದಿರುವ ಹಾಗೂ ಹೆಚ್ಚಿನ ಬೇಡಿಕೆ ಇರುವ 05 ಮೊರಾರ್ಜಿದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗವಿದ್ದು, ಜೊತೆಗೆ ವಾಣಿಜ್ಯ ವಿಭಾಗ ಪ್ರಾರಂಭಿಸಲು ಆದೇಶ ಹೊರಡಿಸಲು ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ರವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:MWD 276 MDS 2018, ಬೆಂಗಳೂರು, ದಿನಾಂಕ:18-08-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಅಲ್ಪಸಂಖ್ಯಾತರ ನಿರ್ದೇಶನಾಲಯದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಉತ್ತಮ ಮೂಲಭೂತ ಸೌಕರ್ಯ ಹೊಂದಿರುವ ಹಾಗೂ ಹೆಚ್ಚಿನ ಬೇಡಿಕೆ ಇರುವ ಈ ಕೆಳಕಂಡಂತೆ 05 ಮೊರಾರ್ಜಿದೇಸಾಯಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗವಿದ್ದು, ತಲಾ ಒಂದು ಉರ್ದು ಭಾಷಾ ಉಪನ್ಯಾಸಕರ ಹುದ್ದೆ ಹಾಗೂ ವಾಣಿಜ್ಯ ವಿಭಾಗ ಪ್ರಾರಂಭಿಸಲು ಸರ್ಕಾರದ ಮಂಜೂರಾತಿ ನೀಡಿ ಆದೇಶಿಸಿದೆ.

| ಕ್ರ. ಸಂ | ಜಿಲ್ಲೆ | ವಸತಿ ಕಾಲೇಜುಗಳ ಸಂಖ್ಯೆ | ವಾಣಿಜ್ಯ ವಿಭಾಗ ವಿಷಯಗಳು | ಮಂಜೂರಾತಿ ಸಂಖ್ಯೆ | | |
|---|---|---|---|---|---|---|
| | | | | 1st PUC | 2nd PUC | Total |
| 1 | ರಾಮನಗರ | 1 | History, Economics, Business Studies, Accountancy (HEBA) | 60 | 60 | 120 |
| 2 | ಬೀದರ್ | 1 | History, Economics, Business Studies, Accountancy (HEBA) | 60 | 60 | 120 |
| 3 | ದಕ್ಷಿಣ ಕನ್ನಡ | 1 | History, Economics, Business Studies, Accountancy (HEBA) | 60 | 60 | 120 |
| 4 | ಕಲಬುರಗಿ | 1 | History, Economics, Business Studies, Accountancy (HEBA) | 60 | 60 | 120 |
| 5 | ಕೊಪ್ಪಳ | 1 | History, Economics, Business Studies, Accountancy (HEBA) | 60 | 60 | 120 |

...2

D/RM/BUDGET/2018/G.O

## ಷರತ್ತುಗಳು:

1. ಕಾಲಕಾಲಕ್ಕೆ ವಸತಿ ಕಾಲೇಜುಗಳಿಗೆ ಒದಗಿಸಿದ ಅನುದಾನದಲ್ಲಿ ಆಹಾರ, ನಿರ್ವಹಣೆ ವೆಚ್ಚ, ಸಿಬ್ಬಂದಿ ವೇತನ, ಎಲ್ಲಾ ಮೂಲಭೂತ ಸೌಕರ್ಯ ನೀಡತಕ್ಕದ್ದು.
2. ಪ್ರತಿ ವರ್ಷ ವಸತಿ ಕಾಲೇಜುಗಳಲ್ಲಿ ನಿಗದಿಪಡಿಸಿದ ಅನುಪಾತದಂತೆ ನಿಯಮಾನುಸಾರ ದಾಖಲಾತಿಗೆ ಕ್ರಮವಹಿಸತಕ್ಕದ್ದು.
3. ಪ್ರತಿ ಶೈಕ್ಷಣಿಕ ವರ್ಷದ ಪ್ರಾರಂಭದಲ್ಲೆ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ, ಸಮವಸ್ತ್ರ, ಎಣ್ಣೆ, ಸಾಬೂನು, ಸೋಪು, ಪೇಸ್ಟ್, ಲೇಖನ ಸಾಮಾಗ್ರಿ ಹಾಸಿಗೆ, ಇತ್ಯಾದಿಗಳನ್ನು ಪೂರೈಸತಕ್ಕದ್ದು.
4. ಅಗತ್ಯವಿರುವ ಹೆಚ್ಚುವರಿ ಕೊಠಡಿ, ಶೌಚಾಲಯ, ಕಾಂಪೌಂಡ್ ಗೋಡೆ, ಸಿ.ಸಿ ರಸ್ತೆ, ಸುಣ್ಣ ಬಣ್ಣ ಇತ್ಯಾದಿ ಮೂಲಭೂತ ಸೌಲಭ್ಯಗಳನ್ನು ಹಂತ ಹಂತವಾಗಿ ವಿಸ್ತರಿಸಲು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಕ್ರಮವಹಿಸುವುದು.
5. ಖಾಯಂ ಸಿಬ್ಬಂದಿ ನೇಮಕವಾಗುವವರೆಗೆ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಗಳನ್ನು ಪಡೆದುಕೊಳ್ಳುವುದು.
6. **ಸದರಿ ಕಾಲೇಜುಗಳಲ್ಲಿ ಹುದ್ದೆಗಳ ಸೃಜನೆಗೆ ಸಂಬಂಧಿಸಿದಂತೆ ಪೂರ್ಣ ಮಾಹಿತಿಯೊಂದಿಗೆ ಪ್ರತ್ಯೇಕವಾಗಿ ಪ್ರಸ್ತಾವನೆಯನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಸಲ್ಲಿಸುವುದು.**
7. ವಸತಿ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳಾದ ಹಾಸಿಗೆ-ಹೊದಿಕೆ, ಮಂಚ, ಟವೆಲ್, ಸ್ವೆಟರ್, ಟ್ರಾಕ್ ಸೂಟ್, ಸೋಲಾರ್ ನೀರು ಕಾಯಿಸುವ ಘಟಕ, ಸೋಲಾರ್ ಲೈಟಿಂಗ್, ಸೋಲಾರ್ ಬೀದಿ ದೀಪ, ವಾಟರ್ ಪ್ಯೂರಿಫಯರ್, ಗಣಕ ಯಂತ್ರ, ಯುಪಿಎಸ್, ಗ್ರಂಥಾಲಯ, ಅಗ್ನಿಶಾಮಕ ಯಂತ್ರ, ಸಿ.ಸಿ.ಕ್ಯಾಮರ, ಸ್ಯಾನಿಟರ್ ನ್ಯಾಪ್‌ಕಿನ್ ಡಿಸ್‌ಪೋಸಲ್ ಇತ್ಯಾದಿ ಒದಗಿಸುವುದು.
8. ಸ್ವಂತ ಕಟ್ಟಡ ಇರುವ ಕಡೆ ಹೆಚ್ಚುವರಿ ಕೊಠಡಿ, ಶೌಚಾಲಯ, ಕಾಂಪೌಂಡ್ ಗೋಡೆ, ಕ್ವಾಟ್ರಸ್, ಕುಡಿಯುವ ನೀರು, ಬೋರ್‌ವೆಲ್, ಆಂತರಿಕ ರಸ್ತೆ, ಚರಂಡಿ ಹಾಗೂ ಇತರೆ ಅಗತ್ಯ ದುರಸ್ಥಿಗಾಗಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಕ್ರಮವಹಿಸತಕ್ಕದ್ದು.

ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ:-2225-03-277-2-80 ಅಲ್ಪಸಂಖ್ಯಾತರಿಗಾಗಿ ವಸತಿ ಶಾಲೆಗಳು ರಾಜ್ಯವಲಯ ಯೋಜನೆ, ಲೆಕ್ಕಶೀರ್ಷಿಕೆ:-4225-03-277-2-03 ಅಲ್ಪಸಂಖ್ಯಾತರಿಗಾಗಿ ವಸತಿ ನಿಲಯ ಮತ್ತು ವಸತಿ ಶಾಲೆ ಕಟ್ಟಡಗಳ ನಿರ್ಮಾಣ ರಾಜ್ಯವಲಯ ಯೋಜನೆಯಡಿ 2018-19ನೇ ಸಾಲಿನಲ್ಲಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು. ಯಾವುದೇ ಕಾರಣಕ್ಕೂ ಹೆಚ್ಚುವರಿ ಅನುದಾನವನ್ನು ಕೋರತಕ್ಕದ್ದಲ್ಲ.

....3

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 471 ವೆಚ್ಚ-3/2018 ದಿನಾಂಕ:02-08-2018 ರಲ್ಲಿ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 33 ಐಎಂಎಂ 2018 ದಿ:26-07-2018ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಅಕ್ರಂ ಭಾಷ)
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ

18/8/18

ಗೆ,

1. ಪ್ರಧಾನ ಮಹಾಲೇಖಪಾಲರು(A & E), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, 20ನೇ ಮಹಡಿ, ವಿ.ವಿ. ಗೋಪುರ, ಬೆಂಗಳೂರು.
4. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿಗಳು.
5. ಸಂಬಂಧಪಟ್ಟ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
6. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ ಇಲಾಖೆ, ವಿ.ವಿ.ಗೋಪುರ, ಡಾ.ಅಂಬೇಡ್ಕರ್ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಯೋಜನಾ ಇಲಾಖೆ, (ಪಿ.ಎಂ.ಐ. ವಿಭಾಗ) ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3), ವಿಧಾನಸೌಧ, ಬೆಂಗಳೂರು.
9. ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
10. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
11. ಸಂಬಂಧಪಟ್ಟ ಜಿಲ್ಲೆಯ ನಿಲಯಪಾಲಕರಿಗೆ (ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರ ಮುಖಾಂತರ).
12. ಶಾಖಾ ರಕ್ಷಾ ಕಡತ.
13. ಹೆಚ್ಚುವರಿ ಪ್ರತಿಗಳು.